**Akashvani : Bangalore**
**Regional Bulletin In Kannada**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**29.07.2025** **18.40 hrs**

ಮುಖ್ಯಾಂಶಗಳು

೧. ಮೈಸೂರು ಭಾಗದ ಸಚಿವರು, ಶಾಸಕರ ಜೊತೆ ಮುಖ್ಯಮಂತ್ರಿ ಸಭೆ ; ಅಭಿವೃದ್ಧಿ ಯೋಜನೆ ಅನುಷ್ಠಾನಕ್ಕೆ ಸಲಹೆ

೨. ಕೋಲಾರದಲ್ಲಿ ಸಿವಿಸಿ, ಪಿವಿಸಿ ಪೈಪ್ ಉತ್ಪಾದನಾ ಸಂಸ್ಥೆ ೨೫೮ ಕೋಟಿ ರೂಪಾಯಿ ಹೂಡಿಕೆಗೆ ತೀರ್ಮಾನ

೩. ಕಲಬುರಗಿಯಲ್ಲಿ ಪದವೀಧರರಿಗೆ ಉದ್ಯೋಗಾವಕಾಶ ಮೌಲ್ಯಮಾಪನ ಅಭಿಯಾನ ನಡೆಸಲು ನಿರ್ಧಾರ

೪. ಕೊಪ್ಪಳ ಜಿಲ್ಲೆಯಲ್ಲಿ ೩ ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ; ರಸಗೊಬ್ಬರಕ್ಕೆ ಆತಂಕ ಪಡುವ ಅಗತ್ಯವಿಲ್ಲ-ಸಚಿವ ಶಿವರಾಜ ತಂಗಡಗಿ

೫. ಧರ್ಮಸ್ಥಳ ಪ್ರಕರಣ ; ಬಿಗಿ ಭದ್ರತೆ ನಡುವೆ ಎಸ್‌ಐಟಿ ಅಧಿಕಾರಿಗಳ ನೇತೃತ್ವದಲ್ಲಿ ಕಳೇಬರ ಶೋಧ

<><*<><>*><>

ಮುಖ್ಯಮಂತ್ರಿ ಸಿದ್ದರಾಮಯ್ಯ ಬೆಂಗಳೂರಿನಲ್ಲಿಂದು ಮೈಸೂರು ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಜಿಲ್ಲೆಯನ್ನು ಪ್ರತಿನಿಧಿಸುವ ಸಚಿವರು ಮತ್ತು ಶಾಸಕರ ಜೊತೆ ಸಭೆ ನಡೆಸಿದರು. ಸಭೆಯಲ್ಲಿ ಜಿಲ್ಲೆಯಲ್ಲಿ ಪ್ರಮುಖವಾಗಿ ನಡೆಯುತ್ತಿರುವ ಅಭಿವೃದ್ಧಿ ಕೆಲಸಗಳ ಸ್ಥಿತಿ ಗತಿ, ಕೃಷಿ ಚಟುವಟಿಕೆಗಳು ಮತ್ತು ಬಿಡುಗಡೆಯಾಗಿರುವ ಅನುದಾನದಲ್ಲಿ ಖರ್ಚಾಗಿರುವ ಹಣದ ಪ್ರಮಾಣ, ಕಾಮಗಾರಿ ಪೂರ್ಣಗೊಳಿಸಲು ಕಾಲಾವಧಿ ನಿಗದಿ ಮಾಡುವ ಕುರಿತು ಚರ್ಚಿಸಿದರು. ಶಾಸಕರ ಅನುದಾನದಲ್ಲಿ ಕೈಗೆತ್ತಿಕೊಂಡಿರುವ ಕಾಮಗಾರಿಗಳು, ಪ್ರಮುಖವಾಗಿ ಕ್ಷೇತ್ರಕ್ಕೆ ಆಗಬೇಕಾದ ಕೆಲಸಗಳಿಗೆ ಪ್ರಸ್ತಾವನೆ ಸಲ್ಲಿಸುವ ಬಗ್ಗೆ ಮುಖ್ಯಮಂತ್ರಿಗಳು ಮಾಹಿತಿ ಪಡೆದು ಸಲಹೆ, ಸೂಚನೆಗಳನ್ನು ನೀಡಿದರು. ಗ್ಯಾರಂಟಿಗಳ ಯಶಸ್ವೀ ಜಾರಿಯಿಂದ ಜಿಲ್ಲೆಯ ಆರ್ಥಿಕತೆ ಮೇಲೆ ಆಗಿರುವ ಸಕಾರಾತ್ಮಕ ಪರಿಣಾಮಗಳ ಬಗ್ಗೆ ಶಾಸಕರ ಗಮನ ಸೆಳೆದರು.

<><*<><>*><>

ಸಿವಿಸಿ ಮತ್ತು ಪಿವಿಸಿ ಪೈಪುಗಳನ್ನು ಉತ್ಪಾದಿಸುವ ಖಾಸಗಿ ಸಂಸ್ಥೆ ರಾಜ್ಯದಲ್ಲಿ ೨೫೮ ಕೋಟಿ ರೂಪಾಯಿ ಹೂಡಿಕೆ ಮಾಡಲು ತೀರ್ಮಾನಿಸಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್ ತಿಳಿಸಿದ್ದಾರೆ. ಕಂಪನಿಗೆ ಕೋಲಾರ ಜಿಲ್ಲೆಯ ವೇಮಗಲ್ ಕೈಗಾರಿಕಾ ಪ್ರದೇಶದ

ಹಂತ-೨ರಲ್ಲಿ ೩೩ ಎಕರೆ ಜಮೀನು ನೀಡಿದ್ದು, ೨೦೨೬ರ ಆಗಸ್ಟ್ ಹೊತ್ತಿಗೆ ಇದು ತನ್ನ ತಯಾರಿಕಾ ಚಟುವಟಿಕೆ ಆರಂಭಿಸಲಿದೆ. ಮುಂದಿನ ದಿನಗಳಲ್ಲಿ ವಿಜಯಪುರ ಜಿಲ್ಲೆಯಲ್ಲೂ ಇದು ಘಟಕವನ್ನು ತೆರೆಯಲಿದೆ ಎಂದು ಹೇಳಿದ್ದಾರೆ. ಈ ಯೋಜನೆಯಿಂದ ೩ ಸಾವಿರ ನೇರ ಉದ್ಯೋಗ ಮತ್ತು ೯ ಸಾವಿರ ಪರೋಕ್ಷ ಉದ್ಯೋಗಗಳು ಸೃಷ್ಟಿಯಾಗಲಿವೆ. ಮುಂದಿನ ಹತ್ತು ವರ್ಷಗಳಲ್ಲಿ ತನ್ನ ವಾರ್ಷಿಕ ವಹಿವಾಟನ್ನು ೧ ಸಾವಿರದ ೫೦೦ ಕೋಟಿ ರೂಪಾಯಿಗಳಿಗೆ ಕೊಂಡೊಯ್ಯುವುದಾಗಿ ಸಂಸ್ಥೆ ಹೇಳಿದೆ. ಇದರಿಂದ ಸರಕಾರಕ್ಕೆ ೩ ಸಾವಿರ ಕೋಟಿ ರೂಪಾಯಿ ತೆರಿಗೆ ರೂಪದಲ್ಲಿ ಬರಲಿದೆ ಎಂದು ಸಚಿವರು ಮಾಹಿತಿ ನೀಡಿದ್ದಾರೆ.

<><*<><>*><>

ರಾಜ್ಯ ಸರ್ಕಾರದಿಂದ ನಿಪುಣ ಕರ್ನಾಟಕ ಕಾರ್ಯಕ್ರಮದಡಿ ಕಲಬುರಗಿಯಲ್ಲಿ ಸ್ಟೆಮ್ ಪದವೀಧರರಿಗಾಗಿ ಉದ್ಯೋಗಾವಕಾಶ ಮೌಲ್ಯಮಾಪನ ಅಭಿಯಾನ ಆರಂಭಿಸಲಾಗುವುದು ಎಂದು ಕಲಬುರಗಿ ಜಿಲ್ಲಾ ಉಸ್ತುವಾರಿ ಹಾಗೂ ಐಟಿ/ ಬಿಟಿ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ಹಂತ ೨ ಮತ್ತು ಹಂತ ೩ ನಗರಗಳಲ್ಲಿ ಪದವೀಧರರಲ್ಲಿ ಹೆಚ್ಚುತ್ತಿರುವ ಉದ್ಯೋಗಾವಕಾಶದ ಅಂತರವನ್ನು ಪರಿಹರಿಸಲು, ಕ್ರಮ ಕೈಗೊಳ್ಳುವುದಾಗಿ ಹೇಳಿದ್ದಾರೆ. ರಾಜ್ಯವು ಸ್ಟೆಮ್ ಪದವೀಧರರಿಗಾಗಿ ಇಂತಹ ಸಮಗ್ರ ಮತ್ತು ಸ್ಥಳೀಯ ಉದ್ಯೋಗಾವಕಾಶದ ಮೌಲ್ಯಮಾಪನ ಕಾರ್ಯಕ್ರಮವನ್ನು ಪ್ರಾರಂಭಿಸಿದ ಮೊದಲ ರಾಜ್ಯವಾಗಿದೆ ಎಂದು ಹೇಳಿದ್ದಾರೆ. ಇಲಾಖೆಯ ಪ್ರಮುಖ ಮರುಕೌಶಲ್ಯ ಮತ್ತು ಕೌಶಲ್ಯಾಭಿವೃದ್ಧಿ ಕಾರ್ಯಕ್ರಮವಾದ 'ನಿಪುಣ ಕರ್ನಾಟಕ' ಅಡಿಯಲ್ಲಿ ಈ ಉಪಕ್ರಮದ ಮೊದಲ ಹಂತವು ಆಗಸ್ಟ್ ೯ ಮತ್ತು ೧೦ ರಂದು ಕಲಬುರಗಿಯಲ್ಲಿ ನಡೆಯಲಿದೆ.

<><*<><>*><>

ಕೊಪ್ಪಳ ಜಿಲ್ಲೆಯಲ್ಲಿ ಜುಲೈ ಅಂತ್ಯದವರಿಗೆ ೨ ಲಕ್ಷ ಹೆಕ್ಟೇರ್ ಪ್ರದೇಶದ ಬಿತ್ತನೆಯ ಗುರಿ ಹೊಂದಲಾಗಿದ್ದು, ೩ ಲಕ್ಷ ಹೆಕ್ಟೇರ್ ಪ್ರದೇಶ ಬಿತ್ತನೆಯಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಶಿವರಾಜ ತಂಗಡಗಿ ತಿಳಿಸಿದ್ದಾರೆ. ಜಿಲ್ಲೆಯ ರೈತರಿಗೆ ಗುರಿಗಿಂತ ಹೆಚ್ಚು ಯೂರಿಯಾ ಗೊಬ್ಬರ ವಿತರಣೆಯಾಗಿದೆ. ರೈತರು ಆತಂಕ ಪಡುವ ಅಗತ್ಯ ಇಲ್ಲ ಎಂದು ತಿಳಿಸಿದ್ದಾರೆ.

**ಧ್ವನಿ : ಶಿವರಾಜ ತಂಗಡಗಿ**

<><*<><>*><>

ರಾಜ್ಯ ಹೈಕೋರ್ಟ್‌ನಲ್ಲಿ ಹೆಚ್ಚುವರಿ ನ್ಯಾಯಾಧೀಶರಾದ ಗುರುಸಿದ್ದಯ್ಯ ಬಸವರಾಜ ಅವರನ್ನು ಶಾಶ್ವತ ನ್ಯಾಯಾಧೀಶರನ್ನಾಗಿ ನೇಮಿಸುವ ಪ್ರಸ್ತಾವನೆಯನ್ನು ಸುಪ್ರೀಂಕೋರ್ಟ್ ಕೊಲಿಜಿಯಂ ಅನುಮೋದಿಸಿದೆ. ಇದೇ ವೇಳೆ ದೇಶದ ೬ ಹೈಕೋರ್ಟ್‌ಗಳಲ್ಲಿ ನ್ಯಾಯಾಧೀಶರ ನೇಮಕಾತಿಗಳನ್ನು ಮುಖ್ಯ ನ್ಯಾಯಮೂರ್ತಿ ಬಿ.ಆರ್. ಗವಾಯಿ ನೇತೃತ್ವದ ಕೊಲಿಜಿಯಂ ಶಿಫಾರಸ್ಸು ಮಾಡಿದೆ.

<><*<><>*><>

ದಕ್ಷಿಣ ಕನ್ನಡ ಜಿಲ್ಲೆಯ ಧರ್ಮಸ್ಥಳ ಗ್ರಾಮದಲ್ಲಿ ಮೃತದೇಹಗಳನ್ನು ಹೂತು ಹಾಕಲಾಗಿದೆ ಎನ್ನುವ ಪ್ರಕರಣಕ್ಕೆ ಸಂಬಂಧಿಸಿದ ತನಿಖೆ ಚುರುಕು ಗೊಂಡಿದೆ. ದೂರುದಾರ ಗುರುತಿಸಿದ ೧೫ ಸ್ಥಳಗಳ ಪೈಕಿ

ಮೊದಲ ಸ್ಥಳವನ್ನು ಅಗೆಯಲಾಗಿದೆ. ಆದರೆ ಈ ಪ್ರದೇಶದಲ್ಲಿ ಯಾವುದೇ ಕಳೇಬರ ಪತ್ತೆಯಾಗಿಲ್ಲ. ಎಸ್‌ಐಟಿ ಅಧಿಕಾರಿಗಳ ನೇತೃತ್ವದಲ್ಲಿ ದೂರುದಾರನ ಸಮ್ಮುಖದಲ್ಲಿ ಜೆಸಿಬಿ ಮೂಲಕ ಮೊದಲ ಸ್ಥಳ ಅಗೆಯಲಾಗಿದ್ದು, ಯಾವುದೇ ಕಳೇಬರ ಪತ್ತೆಯಾಗಿಲ್ಲ ಎಂದು ತನಿಖಾಧಿಕಾರಿ ಅನುಚೇತ್ ಸ್ಪಷ್ಟಪಡಿಸಿದ್ದಾರೆ. ಸತತ ೩ ಗಂಟೆಗಳ ಕಾಲ ಅಗೆಯುವ ಕೆಲಸ ನಡೆದಿದ್ದು, ಇಬ್ಬರು ನುರಿತ ವೈದ್ಯರ ತಂಡ ಸ್ಥಳದಲ್ಲಿ ಹಾಜರಿತ್ತು.

<><*<><>*><>

ಸಣ್ಣ ಕೈಗಾರಿಕೆಗಳ ಸ್ಥಾಪನೆಯಿಂದ ಆರ್ಥಿಕ ವೃದ್ಧಿಯ ಜೊತೆಗೆ ಉದ್ಯೋಗ ಸೃಷ್ಟಿಗೂ ನೆರವಾಗಲಿದೆ ಎಂದು ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪುರ ತಿಳಿಸಿದ್ದಾರೆ. ಯಾದಗಿರಿಯಲ್ಲಿ ಲೀನ್ ಯೋಜನೆ ಮತ್ತು ಝಡ್ ಇಡಿ ಹಾಗೂ ರಫ್ತು ಕುರಿತು ಒಂದು ದಿನದ ಅರಿವು ಮೂಡಿಸುವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ರಾಜ್ಯದ ಸಣ್ಣ ಉದ್ದಿಮೆದಾರರಿಗೆ ಉತ್ತೇಜನ ನೀಡಲು ರಾಜ್ಯ ಸರ್ಕಾರ ವಿಶೇಷ ಗಮನ ನೀಡುತ್ತಿದೆ ಎಂದು ಹೇಳಿದ್ದಾರೆ. ಮುಂಡರಗಿಯಲ್ಲಿ ಕನಿಷ್ಠ ಐವತ್ತುರಿಂದ ನೂರು ಎಕರೆ ಜಮೀನಿನಲ್ಲಿ ಸಣ್ಣ ಕೈಗಾರಿಕೆಗಳ ಉತ್ತೇಜನಕ್ಕೆ, ಭೂ ಸ್ವಾಧೀನ ಪ್ರಕ್ರಿಯೆ ನಡೆದಿದೆ ಎಂದು ಸ್ಪಷ್ಟಪಡಿಸಿದ್ದಾರೆ.

<><*<><>*><>

ರಾಜ್ಯದ ವಿವಿಧೆಡೆ ಇಂದು ಹಣಕಾಸು ಸೇರ್ಪಡೆ ಪರಿಪೂರ್ಣತಾ ಅಭಿಯಾನ ನಡೆಯಿತು. ವಿಜಯಪುರ ಜಿಲ್ಲೆಯ ಜಾಲಗೇರಿ ಗ್ರಾಮದಲ್ಲಿ ನಡೆದ ಅಭಿಯಾನದಲ್ಲಿ ಡಿಜಿಟಲ್ ಸಾಕ್ಷರತೆ ಸೇರಿದಂತೆ ಹಲವು ವಿಷಯಗಳ ಕುರಿತು ಮಾಹಿತಿ ನೀಡಲಾಯಿತು. ಚಿಕ್ಕಬಳ್ಳಾಪುರದಲ್ಲಿ ನಡೆದ ಅಭಿಯಾನದಲ್ಲಿ ಜನಧನ್, ಮುದ್ರಾ ಯೋಜನೆ, ಪ್ರಧಾನ ಮಂತ್ರಿ ಜೀವನಜ್ಯೋತಿ ಭಿಮಾ ಯೋಜನೆ ಮತ್ತು ಪ್ರಧಾನ ಮಂತ್ರಿ ಸುರಕ್ಷಾ ಯೋಜನೆಗಳಂತಹ ಮಹತ್ವದ ಯೋಜನೆಗಳನ್ನು ಪ್ರತಿಯೊಬ್ಬರೂ ಸದ್ಬಳಕೆ ಮಾಡಿಕೊಳ್ಳಬೇಕೆಂದು ಜಿಲ್ಲಾ ಮಾರ್ಗದರ್ಶಿ ಬ್ಯಾಂಕ್ ವ್ಯವಸ್ಥಾಪಕ ವೆಂಕಟಕೃಷ್ಣ ಮನವಿ ಮಾಡಿದರು. ಇದೇ ವೇಳೆ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ವಿಜಯೇಂದ್ರ ಗ್ರಾಹಕರಿಗೆ ಹೆಚ್ಚಿನ ಮಾಹಿತಿ ನೀಡಿದರು.

ಧ್ವನಿ : ವಿಜಯೇಂದ್ರ

<><*<><>*><>

ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ದೆಹಲಿಯಲ್ಲಿಂದು ಹುಬ್ಬಳ್ಳಿ ಗ್ರಾಮೀಣ ಪ್ರದೇಶದ ಅಮರಗೋಳ್‌ನಲ್ಲಿರುವ ಪಿಎಂ ಶ್ರೀ ಸರ್ಕಾರಿ ಮಾದರಿ ಪ್ರಾಥಮಿಕ ಶಾಲೆ ಸೇರಿದಂತೆ ರಾಜ್ಯದ ೩೫ ಪಿಎಂ ಶ್ರೀ ಶಾಲೆಗಳನ್ನು ರಾಷ್ಟ್ರಕ್ಕೆ ಸಮರ್ಪಿಸಿದರು. ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡಿದ, ಹುಬ್ಬಳ್ಳಿ, ಧಾರವಾಡ ಮಹಾನಗರ ಪಾಲಿಕೆಯ ಮೇಯರ್ ಜ್ಯೋತಿ ಪಾಟೀಲ್, ಶಿಕ್ಷಣವು ಪ್ರತಿಯೊಂದು ಯಶಸ್ಸು ಮತ್ತು ಸಾಧನೆಗೆ ವೇದಿಕೆಯನ್ನು ಒದಗಿಸುತ್ತದೆ ಎಂದು ತಿಳಿಸಿದ್ದಾರೆ.

<><*<><>*><>

ಕಾರ್ಮಿಕರ ಏಳಿಗೆಗಾಗಿ ಕಾರ್ಮಿಕ ಇಲಾಖೆ ಕಟ್ಟಿಬದ್ಧವಾಗಿ ದುಡಿಯುತ್ತಿರೋದಾಗಿ ಕಾರ್ಮಿಕ ಇಲಾಖೆ ಸಚಿವ ಸಂತೋಷ್ ಲಾಡ್ ತಿಳಿಸಿದ್ದಾರೆ. ಉತ್ತರ ಕನ್ನಡ ಜಿಲ್ಲೆಯ ಕಾರವಾರದಲ್ಲಿ ಕಾರ್ಮಿಕ ಇಲಾಖೆಯ ವಿವಿಧ ವಲಯಗಳ ಅಸಂಘಟಿತ ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ್ ವಿತರಣೆ ಮತ್ತು ಅರಿವು ಮೂಡಿಸುವ ಕಾರ್ಯಕ್ರಮ ಉದ್ಘಾಟಿಸಿ ಅವರು  ಮಾತನಾಡಿದರು.

**<><*<><>*><>**

ದೇಶಕ್ಕೆ ಅನ್ನದಾತರು ಬೆನ್ನೆಲುಬಾದರೆ ದೇಶದ ಆರ್ಥಿಕ ಅಭಿವೃದ್ಧಿಗೆ ಕೈಗಾರಿಕೆಗಳು ಬೆನ್ನೆಲುಬು ಎಂದು ಸಚಿವ ಕೆ.ಹೆಚ್ ಮುನಿಯಪ್ಪ ತಿಳಿಸಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ತಾಲ್ಲೂಕಿನ ವಿಶ್ವನಾಥಪುರದಲ್ಲಿ ಸೂಕ್ಷ್ಮ ಸಣ್ಣ ಮಧ್ಯಮ ಉದ್ಯಮಿಗಳಿಗೆ ತಂತ್ರಜ್ಞಾನ ಚಿಕಿತ್ಸಾಲಯ-ಏರೋಸ್ಪೇಸ್ ಕ್ಲಸ್ಟರ್ ಕುರಿತ ಎರಡು ದಿನಗಳ ಕಾರ್ಯಾಗಾರಕ್ಕೆ ಚಾಲನೆ ನೀಡಿ ಮಾತನಾಡಿದರು.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ  <>*><>**